# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್

ಸ.ಕಾ.ನಿ.ಅ/ಮನ/ಪಿಆರ್/447 /2021–22 ದಿನಾಂಕ: 14-03-22

ದಿನಾಂಕ:– 14–03–2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:–

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ಸ್ಟಾಂಡೇಜ್ ರಸ್ತೆ, ಎ.ಎಂ.ರಸ್ತೆ ಮತ್ತು ಸಿ.ಎಂ ರಸ್ತೆಗಳಲ್ಲಿರುವ ಬೀದಿ ದೀಪಗಳ ನಿರ್ವಹಣೆಯ ಬಗ್ಗೆ ತಿಳಿಸಲಾಗಿರುತ್ತದೆ.
2. ಸಿ.ಎಂ ರಸ್ತೆಯ ರಾಜಕಾಲುವೆ ಹತ್ತಿರ ಮತ್ತು ಮೋರ್ ರಸ್ತೆಯಲ್ಲಿ ಸರಿಯಾಗಿ ಕಸ ವಿಲೇವಾರಿ ಮಾಡದಿರುವ ತಿಳಿಸಿರುತ್ತಾರೆ.
3. ವಾರ್ಡಿನಲ್ಲಿ ಬಹುಮಹಡಿ ಹಾಗೂ ವಾಣಿಜ್ಯ ಕಟ್ಟಡಗಳ ಕಂದಾಯ ವಸೂಲಾತಿಯಾಗಿರುವ ಮಾಹಿತಿಯನ್ನು ನೀಡಲು ತಿಳಿಸಿರುತ್ತಾರೆ.
4. ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆಗಳನ್ನು ನಿಯಂತ್ರಿಸಲು ಸ್ಪ್ರೇಯಿಂಗ್ ಮತ್ತು ಫಾಗಿಂಗ್ ಮಾಡಲು ತಿಳಿಸಲಾಯಿತು.
5. ನೇತಾಜಿ ಮುಖ್ಯರಸ್ತೆಯಲ್ಲಿ ಹಾದು ಹೋಗಿರುವ ರಾಜಗಾಲುವೆಯ ದುರಸ್ಥಿ ಕಾಮಗಾರಿಯನ್ನು ಕೈಗೊಂಡಿದ್ದು, ಸದರಿ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಯಿತು.
6. ವಾರ್ಡ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ತಿಳಿಸಲಾಗಿರುತ್ತದೆ.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿಗಳು

ಕಾರ್ಯದರ್ಶಿ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner